**ಸಾಕ್ಷಿಯನ್ನು ದಿಃ 17.03.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಈ ದಿನ ನಾನು ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ನಮೂದಿಸಿರುವ ಎಲ್ಲಾ ವಿಷಯಗಳು ಸರಿಯಾಗಿ ಮತ್ತು ಸತ್ಯವಾಗಿರುತ್ತವೆ. ಅದಕ್ಕೆ ನನ್ನ ಸಹಿ ಇರುತ್ತದೆ.

ಅರ್ಜಿದಾರರಿಗೆ ಸಂಬಂಧಿಸಿದ ಕೇಸ್ ಶೀಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ. 12 ಎಂದು,

ಒಟ್ಟು 3 ಎಕ್ಸ್ ರೇ ಫಿಲಂಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿಪಿ. 13 ಎಂದು,

ಒಂದು ಹೊರರೋಗಿ ದಾಖಲೆಗಳ ಕಡತವನ್ನು ಹಾಜರು ಪಡಿಸಿದ್ದು ನಿಪಿ.14 ಎಂದು,

ಗುರುತಿಸಲಾಯಿತು.

**ಪಾಟೀ ಸವಾಲು – 2 ನೇ ಎದುರುದಾರರ ಪರ ವಕೀಲರಿಂದ**

1. ಅರ್ಜಿದಾರರಿಗೆ ತರಚಿದ ಗಾಯಗಳು ಆಗಿತ್ತು ಎಂದರೆ ಸರಿಯಲ್ಲ. ಸಾಮಾನ್ಯ ಗಾಯಗಳಾದ ಕಾರಣ ದಿನಾಂಕ 08.07.2024 ಕ್ಕೆ ದಾಖಲಿಸಿಕೊಂಡು ದಿನಾಂಕ 09.07.2024 ಕ್ಕೆ ಬಿಡುಗಡೆಗೊಳಿಸಿದ್ದೇವೆ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಸಾಮಾನ್ಯ ಸ್ವರೂಪದ ಗಾಯಗಳು ಆಗಿರಲಿಲ್ಲ ಎನ್ನುತ್ತಾರೆ. ನಿಪಿ.6 ನಮ್ಮ ಆಸ್ಪತ್ರೆಯ ದಾಖಲೆ. 1 ಮತ್ತು 2 ನೇ ಗಾಯ ಸಾಮಾನ್ಯ ಗಾಯ ಹಾಗೂ 3 ನೇ ಗಾಯ ತೀವ್ರ ಸ್ವರೂಪದ್ದು. ಸಾಮಾನ್ಯ ಸ್ವರೂಪದ ಗಾಯ ಆದ ಕಾರಣವೇ ಒಂದೇ ದಿನದಲ್ಲಿ ಬಿಡುಗಡೆಯಾಗಿದ್ದಾರೆ ಎಂದರೆ ಸರಿಯಲ್ಲ. ದಿನಾಂಕ 09.07.2024 ರಿಂದ ದಿನಾಂಕ 16.03.2026 ರ ನಡುವೆ ಚಿಕಿತ್ಸೆಗೆ ಬಂದಿದ್ದಾರೆ. ಈ ನಡುವೆ ಚಿಕಿತ್ಸೆಗೆ ಬಂದಿಲ್ಲ ಎಂದರೆ ಸರಿಯಲ್ಲ. ದಿನಾಂಕ 16.03.2026 ರಕ್ಕೆ ನ್ಯೂನತೆ ನಿರ್ಧರಿಸಿಕೊಳ್ಳಲು ಬಂದಿದ್ದಾರೆ ಎಂದರೆ ಅದರೊಟ್ಟಿಗೆ ಚಿಕಿತ್ಸೆಗೆ ಬಂದಿದ್ದರು ಎನ್ನುತ್ತಾರೆ. ಅರ್ಜಿದಾರರಿಗೆ ಯಾವುದೇ ನ್ಯೂನತೆ ಇಲ್ಲ ಎಂದರೆ ಸರಿಯಲ್ಲ. ಅವರ ಪ್ರತಿನಿತ್ಯದ ಕೆಲಸ ಕಾರ್ಯ ಮಾಡಿಕೊಳ್ಳಲು ತೊಂದರೆ ಇಲ್ಲ

ಎಂದರೆ ಸರಿಯಲ್ಲ. ನನ್ನ ಪ್ರಮಾಣ ಪತ್ರದಲ್ಲಿ ನಮೂದಿಸಿರುವ ನ್ಯೂನತೆಯ ಪ್ರಮಾಣಗಳು ಸುಳ್ಳು ಎದಂರೆ ಸರಿಯಲ್ಲ. ಅರ್ಜಿದಾರರಿಗೆ ಪರಿಹಾರ ಸಿಗಲಿ ಎಂಬ ಅನುಕಂಪದಿಂದ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ದಾಖಲೆಗಳನ್ನು ಸೃಷ್ಟಿಸಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ. ಇಂಪ್ಲಾಂಟ್ಸ್ ರಿಮೂವಲ್ ಅವಶ್ಯಕತೆ ಇಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು

ಮತ್ತು ಎಂ.ಎ.ಸಿ.ಟಿ., ಮೈಸೂರು.